NOVEMBER 3, 2026
ALL INDIA RADIO- DHARWAD
PRADESH SAMACHARA (KANNADA) 7:05 AM

ಮುಖ್ಯಾಂಶಗಳು

- **ಕಬ್ಬಿನ ಬೆಲೆ ನಿಗದಿಗೆ ಆಗ್ರಹಿಸಿ** ಮುಂದುವರಿದ ರೈತರ ಪ್ರತಿಭಟನೆ: ಬೆಲೆ ನಿಗದಿಗೊಳಿಸುವ ನಿಟ್ಟಿನಲ್ಲಿ ಇಂದು ಬೆಳಗಾವಿಯಲ್ಲಿ ಕಾರ್ಖಾನೆ ಮಾಲೀಕರ ಸಭೆ
- **ರಾಜ್ಯದ ನೇಕಾರರ** ಆರ್ಥಿಕ ಸುಸ್ಥಿರತೆಗೆ ಹೊಸ ಜವಳಿ ನೀತಿ: ನೇಕಾರಿಕೆಗೆ ವಾಣಿಜ್ಯಿಕ ಬಲ– ಡಾ. ಶಾಲಿನಿ ರಜನೀಶ್ ಅಭಿಮತ.
- **ರಾಜ್ಯದ ಸರ್ಕಾರಿ** ಕಾಲೇಜುಗಳಲ್ಲಿ ಗುಣಮಟ್ಟದ ಶಿಕ್ಷಣ ನೀಡಲು ರೋಟರಿ ಅಂತರರಾಷ್ಟ್ರೀಯ ಸಂಸ್ಥೆಯೊಂದಿಗೆ ಸರ್ಕಾರದ ಒಪ್ಪಂದ.
- **ಗ್ರಾಮೀಣ ಉದ್ಯೋಗ ಖಾತ್ರಿ** ಯೋಜನೆ ದೂರುಗಳ ಇತ್ಯರ್ಥಕ್ಕೆ 15 ದಿನಗಳ ಗಡುವು: ಕೇಂದ್ರದಿಂದ ಹೊಸ ನಿಯಮ ಜಾರಿ

ಈಗ ವಾರ್ತೆಗಳ ವಿವರ

****

ಕಬ್ಬಿನ ಬೆಲೆ ಪ್ರತಿ ಟನ್‌ಗೆ 5 ಸಾವಿರದ 500 ನಿಗದಿಪಡಿಸುವಂತೆ ಆಗ್ರಹಿಸಿ ರೈತರು ನಡೆಸುತ್ತಿರುವ ಪ್ರತಿಭಟನೆ ಮುಂದುವರಿದಿದ್ದು, ರೈತರು ಬೆಳಗಾವಿ ಹಿಂಡಲಗಾ ಕಾರಾಗೃಹದ ಎದುರು ಪ್ರತಿಭಟನೆ ನಡೆಸುತ್ತಿದ್ದಾರೆ. ಬೆಲೆ ನಿಗದಿಗೆ ಆಗ್ರಹಿಸಿ ಹುಕ್ಕೇರಿ ತಾಲೂಕಿನ ಗುರ್ಲಾಪುರದ ರಾಷ್ಟ್ರೀಯ ಹೆದ್ದಾರಿಯಲ್ಲಿ ಕಳೆದ 9 ದಿನಗಳಿಂದ ಹೋರಾಟ ನಡೆಸುತ್ತಿರುವ ಬೆಳಗಾವಿ ಭಾಗದ ರೈತರು, ತಮ್ಮ ಪ್ರತಿಭಟನಾ ಸ್ಥಳವನ್ನು ಬೆಳಗಾವಿ ಹಿಂಡಲಗಾ ಜೈಲಿನ ಆವರಣಕ್ಕೆ ಸ್ಥಳಾಂತರಿಸಿದ್ದಾರೆ. ಬೆಲೆ ನಿಗದಿಯಾಗುವವರೆಗೂ ಇಲ್ಲಿಂದ ಕದಲುವುದಿಲ್ಲ. ಸಕ್ಕರೆ ಬೆಲೆ 56 ರೂಪಾಯಿ ಹೆಚ್ಚಾಗಿದ್ದು, ರೈತರ ಬೆಳೆಗೆ ಕೂಡಲೇ ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಿದ್ದಾರೆ. ಈ ಮಧ್ಯೆ, ಇಂದು, ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳ ಕಚೇರಿಗೆ ರೈತರು ಮುತ್ತಿಗೆ ಹಾಕಲಿದ್ದು, 6 ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನಾ ಧರಣಿ ನಡೆಸಲಾಗುವುದು ಎಂದು ರಾಜ್ಯ ಕಬ್ಬು ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ಮಾಹಿತಿ ನೀಡಿದ್ದಾರೆ.

****

ಕಬ್ಬಿನ ಬೆಲೆ ನಿಗದಿಗೊಳಿಸುವ ನಿಟ್ಟಿನಲ್ಲಿ ಇಂದು ಬೆಳಗಾವಿಯಲ್ಲಿ ಕಾರ್ಖಾನೆ ಮಾಲೀಕರ ಸಭೆ ನಡೆಯಲಿದೆ. ಬೆಳಗಾವಿಯಲ್ಲಿ ಈ ವಿಷಯ ತಿಳಿಸಿದ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ, ಕಬ್ಬಿನ ಬೆಲೆ ನಿಗದಿಗೊಳಿಸುವುದು ಸಚಿವನಾಗಿ, ಕಾರ್ಖಾನೆ ಮಾಲೀಕನಾಗಿ ನಾನೊಬ್ಬನೆ ನಿರ್ಧಾರ ಕೈಗೊಳ್ಳಲು ಸಾಧ್ಯವಿಲ್ಲ. ಕಾರ್ಖಾನೆ ಮಾಲೀಕರ ಅಧಿಕೃತ ಸಂಘಟನೆ ಇದೆ.

ಮಂಗಳವಾರ ಅಂದರೆ ಇಂದು ಮಧ್ಯಾಹ್ನ ಜಿಲ್ಲಾಧಿಕಾರಿ ಮೂಲಕ ಎಲ್ಲ ಮಾಲೀಕರ ಸಭೆ ಕರೆದು ಚರ್ಚಿಸಲಾಗುವುದು ಎಂದರು. ಕೇಂದ್ರ ಸರ್ಕಾರ ಬೆಲೆ ನಿಗದಿಗೊಳಿಸಿದ ಮೇಲೆ ಕಾರ್ಖಾನೆಗಳು ಬೆಲೆ ನಿಗದಿಗೊಳಿಸಲು ಸಾಧ್ಯವಿದೆ. ಈ ಮಧ್ಯ ಕಬ್ಬು ಅರಿಯುವಿಕೆ ತಡವಾಗುತ್ತಿದ್ದು, ಸಮಸ್ಯೆ ಕುರಿತಂತೆ ಸಭೆಯಲ್ಲಿ ಎಲ್ಲರ ಜೊತೆ ಸಮಾಲೋಚಿಸಲಾಗುವುದು ಎಂದು ಸಚಿವರು ಹೇಳಿದರು.

****

ಕಬ್ಬು ಬೆಳೆಗಾರರ ಪ್ರತಿಭಟನೆ ಹಿನ್ನೆಲೆ, ಮೊದಲ ಮುಂಗಡ ಕಂತಿನ ಹಣ ಪಾವತಿಸುವ ಕುರಿತು ಸಕ್ಕರೆ ಕಾರ್ಖಾನೆ ಮಾಲೀಕರ ಜೊತೆ ಮಾತುಕತೆ ನಡೆಸಲಾಗಿದೆ ಎಂದು ಸಹಕಾರ ಖಾತೆ ಸಚಿವ ಲಕ್ಷ್ಮಣ ಸವದಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕನಿ ್ಠ ಮಾರಾಟ ದರ ನಿಗದಿಯಾದ ಬಳಿಕ ಕಬ್ಬಿನ ನಿಖರ ದರ ನಿಗದಿ ಮಾಡಲಾಗುವುದು. ಈ ಸಂಬಂಧ ರೈತರು ಮತ್ತು ಸಕ್ಕರೆ ಕಾರ್ಖಾನೆ ಮಾಲೀಕರೊಂದಿಗೆ ಚರ್ಚಿಸಿ, ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು ಎಂದರು. ರಾಜ್ಯದಲ್ಲಿ ಮಳೆ ಕೊರತೆಯಿಂದ ಕೊಳವೆ ಬಾವಿಗಳು, ತೆರೆದ ಬಾವಿಗಳು ಬತ್ತುತ್ತಿದ್ದು, ಇದರಿಂದಾಗಿ ಕಬ್ಬು ಬೆಳೆಗೆ ನೀರು ಪೂರೈಸುವುದು ಕ ್ಟವಾಗುತ್ತಿದೆ. ಈ ಹಿನ್ನೆಲೆಯಲ್ಲಿ ತಕ್ಷಣಕ್ಕೆ ನಿರ್ಧಾರ ಆಗಬೇಕಿದೆ. ಇದಕ್ಕೆ ಸಂಬಂಧಿಸಿದಂತೆ ಕೇಂದ್ರ ಸಚಿವರೊಂದಿಗೂ ಚರ್ಚೆ ನಡೆಸಿದ್ದು, ಆದ ್ಟ ಬೇಗ ತೀರ್ಮಾನಕ್ಕೆ ಬರಲು ಮನವಿ ಮಾಡಲಾಗಿದೆ. ಎಂದು ಸಚಿವರು ಹೇಳಿದರು.

****

ವಿಜಯನಗರ ಜಿಲ್ಲೆಯಲ್ಲಿ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸುವ ನಿಟ್ಟಿನಲ್ಲಿ ಅರ್ಹ ಫಲಾನುಭವಿಗಳಿಗೆ ನಿಯಮಾನುಸಾರ ಪರಿಹಾರ ತಲುಪಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಸ್. ಬಸವಂತಪ್ಪ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಬರ ನಿರ್ವಹಣೆಯ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯ ಆರು ತಾಲ್ಲೂಕುಗಳನ್ನೂ ಬರಪೀಡಿತ ಎಂದು ಘೋಷಿಸಲಾಗಿದ್ದು, ಜಿಲ್ಲೆಯಲ್ಲಿನ 2,77,218.60 ಹೆಕ್ಟೇರ್ ಬೆಳೆಗೆ ಹಾನಿಯುಂಟಾಗಿದೆ. 25,708.52 ಲಕ್ಷ ಬೆಳೆ ಪರಿಹಾರ ಅನುದಾನಕ್ಕಾಗಿ ಬೇಡಿಕೆ ಸಲ್ಲಿಸಲಾಗಿದೆ ಎಂದರು. ಜಿಲ್ಲೆಯಲ್ಲಿ ಪ್ರಸ್ತುತ 37 ವಾರಗಳಿಗೆ ಸಾಕಾಗುವ ್ಟ ಮೇವು ಲಭ್ಯವಿದೆ. ಆದರೂ ಕೂಡ್ಲಿಗಿ ತಾಲ್ಲೂಕಿನಲ್ಲಿ ದೇವರ ಎತ್ತುಗಳ ಸಂಖ್ಯೆ ಹೆಚ್ಚಿರುವುದರಿಂದ ಮೇವಿನ ಕೊರತೆ ಉಂಟಾಗುತ್ತಿದೆ ಎಂಬ ದೂರುಗಳು ಬಂದಿದ್ದು, ಈ ಸಮಸ್ಯೆ ನಿವಾರಿಸಲು ಕೊಳವೆಬಾವಿ ಕೊರೆಸುವ ಮೂಲಕ ಮೇವು ಬಿತ್ತನೆಗೆ ಕ್ರಮ ಕೈಗೊಳ್ಳಬೇಕು. ಪಾಳುಬಿದ್ದಿರುವ ಸರ್ಕಾರಿ ಜಮೀನುಗಳನ್ನು ಮೇವು ಬೆಳೆಯಲು ಸಮರ್ಪಕವಾಗಿ ಬಳಸಿಕೊಳ್ಳಬೇಕು ಎಂದು ಸಚಿವರು ಸೂಚನೆ ನೀಡಿದರು.

****

ಜನರ ಸಮಸ್ಯೆಗಳನ್ನು ಸ್ಥಳದಲ್ಲೇ ಆಲಿಸಿ ಪರಿಹಾರ ಕಂಡುಹಿಡಿಯುವ ಉದ್ದೇಶದಿಂದ ಪ್ರಜಾಸೇವಾ ಆಂದೋಲನ ಆಯೋಜಿಸಲಾಗುತ್ತಿದೆ ಎಂದು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಹೇಳಿದ್ದಾರೆ. ಧಾರವಾಡ ತಾಲೂಕಿನ ಮನಸೂರು, ಮನಗುಂಡಿ, ಮುಮ್ಮಿಗಟ್ಟಿ ಗ್ರಾಮಗಳಲ್ಲಿ ಪ್ರಜಾಸೇವಾ ಆಂದೋಲನ ಸಭೆ ಜರುಗಿಸಿ, ಮಾತನಾಡಿದ ಅವರು, ಈ ಕಾರ್ಯಕ್ರಮದ ಮೂಲಕ ಜಿಲ್ಲಾಡಳಿತದ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಗ್ರಾಮ ಪಂಚಾಯತಿ ಕೇಂದ್ರ ಸ್ಥಾನಕ್ಕೆ ಕರೆತಂದು, ಜನರ ಸಮಸ್ಯೆಗಳನ್ನು ಬಗೆಹರಿಸಲು ಪ್ರಯತ್ನಿಸಲಾಗುತ್ತಿದೆ ಎಂದರು. ಗ್ರಾಮದ ಅಭಿವೃದ್ಧಿ ಹಾಗೂ ಜನರ ಕ ್ಟಗಳ ನಿವಾರಣೆಗೆ

ರಾಜಕೀಯ ಪಕ್ಷಗಳು ಪಕ್ಷಬೇಧ ಮರೆತು ಕಾರ್ಯ ನಿರ್ವಹಿಸಬೇಕು. ಎಲ್ಲ ಸಮಾಜದ ಮುಖಂಡರು ಪಕ್ಷಾತೀತವಾಗಿ ಒಂದಾಗಿ ಒಳ್ಳೆಯ ಕೆಲಸಕ್ಕೆ ಕೈಜೋಡಿಸಬೇಕು ಎಂದು ಸಚಿವರು ಮನವಿ ಮಾಡಿದರು.

****

ರಾಜ್ಯದ ಹೊಸ ಜವಳಿ ನೀತಿ ಕಲ್ಯಾಣ ಆಧಾರಿತ ಮಾದರಿಯಿಂದ ಆರ್ಥಿಕ ಮಾದರಿಗೆ ಬದಲಾವಣೆ ತಂದಿದೆ ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅಭಿಪ್ರಾಯಪಟ್ಟಿದ್ದಾರೆ. ನ್ಯಾ ‘ನಲ್ ಆರ್ಟ್ ಗ್ಯಾಲರಿ, ಭಾರತ ಸರಕಾರದ ಸಂಸ್ಕೃತಿ ಇಲಾಖೆ ಹಾಗೂ ಬಲ್ಡೋಟಾ ಪ್ರತಿ ಷ್ಠಾನ ಜಂಟಿಯಾಗಿ ಆಯೋಜಿಸಿದ್ದ ‘ಪಂಪಾ‘ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ನೇಕಾರರ ಬದುಕನ್ನು ಸುಸ್ಥಿರಗೊಳಿಸಲು ಹಾಗೂ ಈ ರಂಗಕ್ಕೆ ಆರ್ಥಿಕ ಚೈತನ್ಯ ನೀಡಲು ನೂತನ ಜವಳಿ ನೀತಿ ಸಹಕಾರಿಯಾಗಿದೆ ಎಂದರು. ಮೈಸೂರು ಸಿಲ್ಕ್, ಮೊಳಕಾಲ್ಮೂರು ಸಿಲ್ಕ್, ಉಡುಪಿ ಸೀರೆಗಳು, ದಕ್ಷಿಣ–ಮಧ್ಯ ಕರ್ನಾಟಕದ ಚರಕ ಸೀರೆಗಳು, ಬೆಂಗಳೂರು ಸಿಲ್ಕ್, ಯಾದಗಿರಿಯ ಫರ್ನಿಷಿಂಗ್ ಬಟ್ಟೆಗಳು, ಸಂಡೂರಿನ ಲಂಬಾಣಿ ಉಡುಪುಗಳು ಹಾಗೂ ಧಾರವಾಡದ ಕಸೂತಿ ಕಲೆಯು ರಾಜ್ಯದ ಜವಳಿ ವೈವಿಧ್ಯತೆಗೆ ಜೀವಂತ ಸಾಕ್ಷಿಗಳಾಗಿವೆ. ಕರ್ನಾಟಕದ ಪಾರಂಪರಿಕ ನೇಕಾರಿಕಾ ಕ್ಲಸ್ಟರ್‌ಗಳನ್ನು ಒಳಗೊಂಡ ಸಮಗ್ರ ಪುನಶ್ಚೇತನ ಯೋಜನೆಯನ್ನು ಪ್ರಾಯೋಗಿಕವಾಗಿ ಜಾರಿಗೊಳಿಸಲು ಕರ್ನಾಟಕವನ್ನು ಆಯ್ಕೆ ಮಾಡಬೇಕು ಎಂದು ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದರು.

****

ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..

ಪ್ರಕಟಣೆ–32 ಸೆಕೆಂಡ್ಸ್

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

****

ರಾಜ್ಯದ ಸರ್ಕಾರಿ ಕಾಲೇಜುಗಳಲ್ಲಿ ಗುಣಮಟ್ಟದ ಶಿಕ್ಷಣ ನೀಡಲು ರೋಟರಿ ಅಂತರರಾಷ್ಟ್ರೀಯ ಸಂಸ್ಥೆಯೊಂದಿಗೆ ಸರ್ಕಾರ ಒಪ್ಪಂದ ಮಾಡಿಕೊಂಡಿದೆ. ಈ ‘ಜ್ಞಾನ ಸೇತು‘ ಒಡಂಬಡಿಕೆ ರಾಜ್ಯದ ಸರ್ಕಾರಿ ಕಾಲೇಜುಗಳಲ್ಲಿ ಗುಣಮಟ್ಟದ ಶಿಕ್ಷಣ ನೀಡಲು ಅತ್ಯಂತ ಸಹಕಾರಿಯಾಗಲಿದೆ. ಬೆಂಗಳೂರಿನ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿ ‘ತ್ತಿನಲ್ಲಿ ಆಯೋಜಿಸಲಾಗಿದ್ದ ಒಡಂಬಡಿಕೆ ವಿನಿಮಯ ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವ ಬಸವರಾಜ ರಾಯರಡ್ಡಿ, ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯ 550 ಕ್ಕೂ ಹೆಚ್ಚು ಕಾಲೇಜುಗಳಲ್ಲಿ ಸುಮಾರು 5 ಲಕ್ಷ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದು, ಇವರಲ್ಲಿ ಬಹುತೇಕರು ಗ್ರಾಮೀಣ ಹಿನ್ನೆಲೆಯ, ಆರ್ಥಿಕವಾಗಿ ಹಿಂದುಳಿದ ವರ್ಗಗಳಿಗೆ ಸೇರಿದವರಾಗಿದ್ದಾರೆ. ಇಂತಹ ವಿದ್ಯಾರ್ಥಿಗಳಿಗೆ ಅತ್ಯಾಧುನಿಕ ಮತ್ತು ಗುಣಮಟ್ಟದ ಶಿಕ್ಷಣ ತಲುಪಿಸಲು ಈ ಯೋಜನೆ ನೆರವಾಗಲಿದೆ ಎಂದರು. ರೋಟರಿ ಸಂಸ್ಥೆಯೊಂದಿಗೆ 3 ವ ‘ರ್ಷಗಳ ಅವಧಿಗೆ ಈ ಒಪ್ಪಂದ ಮಾಡಿಕೊಳ್ಳಲಾಗಿದೆ ಎಂದು ಸಚಿವರು ಮಾಹಿತಿ ನೀಡಿದರು.

****

ಗ್ರಾಮೀಣ ಉದ್ಯೋಗ ಯೋಜನೆಯ ಅನು ಷ್ಠಾನಕ್ಕೆ ಸಂಬಂಧಿಸಿದ ದೂರುಗಳನ್ನು 15 ದಿನಗಳೊಳಗೆ ಇತ್ಯರ್ಥಪಡಿಸುವುದನ್ನು ಕಡ್ಡಾಯಗೊಳಿಸಿ ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವಾಲಯ ಅಧಿಸೂಚನೆ ಹೊರಡಿಸಿದೆ. ವಿಕಸಿತ ಭಾರತ–ಉದ್ಯೋಗ ಮತ್ತು

ಜೀವನೋಪಾಯ ಅಭಿಯಾನ ಕಾಯ್ದೆ, ಹೊಸ ನಿಯಮದ ಅನ್ವಯ ರಾಜ್ಯ ಸರ್ಕಾರಗಳು ಗ್ರಾಮ ಪಂಚಾಯಿತಿ, ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ದೂರುಗಳ ಪರಿಹಾರ ಅಧಿಕಾರಿಗಳನ್ನು ನೇಮಿಸಲಿವೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಕಾರ್ಯಕ್ರಮ ಸಂಯೋಜಕರು ಸಂಪೂರ್ಣ ಪ್ರಕ್ರಿಯೆಯ ಮೇಲ್ವಿಚಾರಣೆ ನಡೆಸಲಿದ್ದಾರೆ. ಸಾರ್ವಜನಿಕರು ತಮ್ಮ ದೂರುಗಳನ್ನು ಖುದ್ದಾಗಿ, ಸ್ವೀಕೃತಿ ದೃಢೀಕರಣ ಹೊಂದಿರುವ ನೋಂದಾಯಿತ ಅಂಚೆ ಮೂಲಕ, ನಿಗದಿತ ಡಿಜಿಟಲ್ ವ್ಯವಸ್ಥೆ ಅಥವಾ ದೂರವಾಣಿ ಸಹಾಯವಾಣಿ ಮೂಲಕ ಸಲ್ಲಿಸಬಹುದು. ದೂರು ಪರಿಹಾರ ಅಧಿಕಾರಿಗಳು ಏಳು ಕೆಲಸದ ದಿನಗಳೊಳಗೆ ದೂರಿನ ವಿಚಾರಣೆ ಪೂರ್ಣಗೊಳಿಸಬೇಕು. ಒಟ್ಟು 15 ದಿನಗಳೊಳಗೆ ಅಂತಿಮ ತೀರ್ಮಾನ ಕೈಗೊಳ್ಳುವುದನ್ನು ಕಡ್ಡಾಯಗೊಳಿಸಲಾಗಿದೆ.

****

ಕನ್ನಡ ಭಾ ೆಯ ಸಮಗ್ರ ಅಭಿವೃದ್ಧಿಗೆ ರಾಜ್ಯ ಸರ್ಕಾರ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿದೆ. ಕನ್ನಡದ ಉಳಿವು, ಬೆಳವಣಿಗೆ ಮತ್ತು ಅಭಿವೃದ್ಧಿಗೆ ಶ್ರಮಿಸುವುದು ಪ್ರತಿಯೊಬ್ಬ ಕನ್ನಡಿಗನ ಕರ್ತವ್ಯ ಎಂದು ಸಮಾಜ ಕಲ್ಯಾಣ ಇಲಾಖೆ ಸಚಿವ ಕೆ.ಹೆಚ್. ಮುನಿಯಪ್ಪ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯಲ್ಲಿ ತಾಲ್ಲೂಕು ಕನ್ನಡ ಸಾಹಿತ್ಯ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಅವರು, ಸುಮಾರು ಎರಡು ಸಾವಿರ ವ ್ಷಗಳಿಗೂ ಹೆಚ್ಚಿನ ಇತಿಹಾಸ ಹೊಂದಿರುವ ಕನ್ನಡ ಭಾ ೆಗೆ ಶ್ರೀಮಂತ ಸಾಹಿತ್ಯ, ಸಂಸ್ಕೃತಿ ಹಾಗೂ ಪರಂಪರೆಯ ಹಿನ್ನೆಲೆಯಿದೆ. ಪ್ರತಿಯೊಬ್ಬರೂ ಕನ್ನಡವನ್ನು ಪ್ರೀತಿಸುವುದರ ಜೊತೆಗೆ ದೈನಂದಿನ ಬದುಕಿನಲ್ಲಿ ಕನ್ನಡದ ಬಳಕೆಗೆ ಆದ್ಯತೆ ನೀಡಬೇಕು ಎಂದು ಸಚವರು ಹೇಳಿದರು.

****

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ಕಬ್ಬಿನ ಬೆಲೆ ನಿಗದಿಗೆ ಆಗ್ರಹಿಸಿ ಮುಂದುವರಿದ ರೈತರ ಪ್ರತಿಭಟನೆ: ಬೆಲೆ ನಿಗದಿಗೊಳಿಸುವ **ನಿಟ್ಟಿನಲ್ಲಿ** ಇಂದು ಬೆಳಗಾವಿಯಲ್ಲಿ ಕಾರ್ಖಾನೆ ಮಾಲೀಕರ ಸಭೆ

ರಾಜ್ಯದ ನೇಕಾರರ ಆರ್ಥಿಕ ಸುಸ್ಥಿರತೆಗೆ ಹೊಸ ಜವಳಿ ನೀತಿ: ನೇಕಾರಿಕೆಗೆ ವಾಣಿಜ್ಯಿಕ ಬಲ– ಡಾ. ಶಾಲಿನಿ ರಜನೀಶ್ ಅಭಿಮತ.

ರಾಜ್ಯದ ಸರ್ಕಾರಿ ಕಾಲೇಜುಗಳಲ್ಲಿ ಗುಣಮಟ್ಟದ ಶಿಕ್ಷಣ ನೀಡಲು ರೋಟರಿ ಅಂತರರಾಷ್ಟ್ರೀಯ ಸಂಸ್ಥೆಯೊಂದಿಗೆ ಸರ್ಕಾರದ ಒಪ್ಪಂದ.

ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ದೂರುಗಳ ಇತ್ಯರ್ಥಕ್ಕೆ 15 ದಿನಗಳ ಗಡುವು: ಕೇಂದ್ರದಿಂದ ಹೊಸ ನಿಯಮ ಜಾರಿ

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

****